# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಸ್.ಶಿವಪ್ರಕಾಶ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಗುಬ್ಬಿ, ತುಮಕೂರು ಜಿಲ್ಲೆ ಇವರ ಬಗ್ಗೆ ಆದೇಶ.

ಓದಲಾಗಿದೆ:- ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್. ತುಮಕೂರುರವರ ಪತ್ರ ದಿನಾಂಕ 24.06.2017.

----------

ಪ್ರಸ್ತಾವನೆ:-

ಮೇಲೆ ಓದಲಾದ ಪತ್ರದಲ್ಲಿ ಶ್ರೀ ಎಸ್.ಶಿವಪ್ರಕಾಶ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಗುಬ್ಬಿ, ತುಮಕೂರು ಜಿಲ್ಲೆ ಇವರನ್ನು ಇವರ ಕಾರ್ಯಕ್ಷಮತೆ ಮತ್ತು ಅಸಮರ್ಪಕ ಕಾರ್ಯವೈಖರಿಯ ಬಗ್ಗೆ ವಿವಿಧ ಯೋಜನೆಗಳಡಿ ಪ್ರಗತಿಯನ್ನು ಸಾಧಿಸುವಲ್ಲಿ ಬೇಜವಾಬ್ದಾರಿ, ನಿರ್ಲಕ್ಷತೆ ವಹಿಸಿ ಕಳಪೆ ಪ್ರಗತಿಯನ್ನು ಸಾಧಿಸಿರುವುದು ಹಾಗೂ ಯೋಜನೆಯ ಅನುಷ್ಠಾನದಲ್ಲಿ ಎಸಗಿರುವ ಕರ್ತವ್ಯ ಲೋಪ, ಸಾರ್ವಜನಿಕರು ಮತ್ತು ಚುನಾಯಿತ ಪ್ರತಿನಿಧಿಗಳಿಗೆ ಸ್ಪಂದಿಸದಿರುವುದು ಹಾಗೂ ಇನ್ನಿತರೆ ಕರ್ತವ್ಯ ಲೋಪಗಳ ಬಗ್ಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುತ್ತಾ, ಶ್ರೀ ಎಸ್.ಶಿವಪ್ರಕಾಶ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಗುಬ್ಬಿ, ತುಮಕೂರು ಜಿಲ್ಲೆ ಇವರನ್ನು ತಕ್ಷಣ ಅಮಾನತ್ತುಪಡಿಸಿ, ಸದರಿಯವರ ವಿರುದ್ಧದ ಆರೋಪಗಳ ಕುರಿತು ಇಲಾಖಾ ವಿಚಾರಣೆಗೆ ಆದೇಶಿಸಬೇಕೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರುರವರು ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರುರವರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಇಲಾಖೆಯ ಮಹತ್ತರ ಯೋಜನೆಗಳಲ್ಲಿ ಶ್ರೀ ಎಸ್.ಶಿವಪ್ರಕಾಶ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಗುಬ್ಬಿ, ತುಮಕೂರು ಜಿಲ್ಲೆ ಇವರು ಪ್ರಗತಿಯನ್ನು ಸಾಧಿಸುವಲ್ಲಿ ವಿಫಲರಾಗಿರುವುದು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಹಾಗೂ ಕರ್ತವ್ಯ ಲೋಪ ಮತ್ತು ಮೇಲಾಧಿಕಾರಿಗಳ ಆದೇಶವನ್ನು ಪಾಲಿಸದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದು, ಈ ಹಿನ್ನೆಲೆಯಲ್ಲಿ ಸದರಿ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ, ಸೇವೆಯಿಂದ ಅಮಾನತ್ತುಗೊಳಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 171 ವಿಸೇಬಿ 2017 ದಿನಾಂಕ: 04.11.2017**

ಶ್ರೀ ಎಸ್.ಶಿವಪ್ರಕಾಶ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಗುಬ್ಬಿ, ತುಮಕೂರು ಜಿಲ್ಲೆ ಇವರು ಇಲಾಖೆಯ ಮಹತ್ತರ ಯೋಜನೆಗಳಲ್ಲಿ ಪ್ರಗತಿಯನ್ನು ಸಾಧಿಸುವಲ್ಲಿ ವಿಫಲರಾಗಿರುವುದು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಹಾಗೂ ಕರ್ತವ್ಯ ಲೋಪ ಮತ್ತು ಮೇಲಾಧಿಕಾರಿಗಳ ಆದೇಶವನ್ನು ಪಾಲಿಸದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ

ನಡೆದುಕೊಂಡಿರುವ ಹಿನ್ನೆಲೆಯಲ್ಲಿ ಸದರಿ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ, ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ.) ನಿಯಮಗಳು 1957ರ ನಿಯಮ-10(1)(ಡಿ)ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಗೊಳಿಸಿ, ಆದೇಶಿಸಿದೆ.

ಅಮಾನತ್ತುಗೊಂಡಿರುವ ಅಧಿಕಾರಿಯು ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನಾಧಾರ ಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.

ಸದರಿಯವರು ಅಮಾನತ್ತಿನ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಇಲ್ಲದೇ ಕೇಂದ್ರಸ್ಥಾನವನ್ನು ಬಿಡತಕ್ಕದ್ದಲ್ಲವೆಂದು ತಿಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

4/11/17

(ಡಿ.ಎಸ್.[illegible])
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು-ಬಿ ಮತ್ತು ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:-

1) ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು.
3) ಸಂಬಂಧಿಸಿದ ಅಧಿಕಾರಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ಇವರ ಮುಖಾಂತರ.

ಪ್ರತಿ ಮಾಹಿತಿಗಾಗಿ:-

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ(ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.